ಮಾಗಡಿ ತಾಲ್ಲೂಕು ಸರ್ಕಾರಿ ಆಸ್ಪತ್ರೆಯಲ್ಲಿರುವ ಖಾಲಿ ಇರುವ ವೈದ್ಯರ ಹುದ್ದೆಗಳು.

777(1206) ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಮಾಗಡಿ ತಾಲ್ಲೂಕ್ ಸರ್ಕಾರಿ ಆಸ್ಪತ್ರೆಯಲ್ಲಿ ಕೊರತೆ ಇರುವ ವೈದ್ಯರುಗಳ ಸಂಖ್ಯೆ ಎಷ್ಟು? ಈ ಹುದ್ದೆಗಳು ಯಾವುವು?

2. ವೈದ್ಯರ ಕೊರತೆಯಿಂದ ಮಾಗಡಿ ತಾಲ್ಲೂಕಿನ ಬಡಜನರಿಗೆ ಭಾರಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

3. ಮಹಿಳಾ ವೈದ್ಯರನ್ನು ಮತ್ತು ಇತರೆ ವೈದ್ಯರನ್ನು ನೇಮಿಸಿದ್ದರೂ ಅವರು ಕರ್ತವ್ಯದ ಮೇಲೆ ಹಾಜರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

4. ಮಾಗಡಿ ತಾಲ್ಲೂಕು ಆಸ್ಪತ್ರೆಯಲ್ಲಿನ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿಮಾಡಲು ಹಾಗೂ ಕರ್ತವ್ಯದ ಮೇಲೆ ಹಾಜರಾಗದಿರುವ ವೈದ್ಯರ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಯಾವುವು?

ಡಾ: ಹೆಚ್.ಸಿ. ಮಹಾದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

1. ಒಂದು ಮಹಿಳಾ ವೈದ್ಯಾಧಿಕಾರಿ ಹುದ್ದೆ ಖಾಲಿ ಇದೆ.

2. ಬಂದಿದೆ.

3. ಬಂದಿದೆ.

4. ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯಾಧಿಕಾರಿಗಳಿಂದ ಖಾಲಿ ಇರುವ ಮಹಿಳಾ ವೈದ್ಯಾಧಿಕಾರಿ ಹುದ್ದೆಯನ್ನು ತುಂಬಲು ಅಥವಾ 1999ರ ಸಾರ್ವಜನಿಕ ವರ್ಗಾವಣೆಯಲ್ಲಿ ತುಂಬಲು ಕ್ರಮ ತೆಗೆದುಕೊಳ್ಳಲಾಗುವುದು.

ಈ ಆಸ್ಪತ್ರೆ ವರ್ಗಾವಣೆಗೊಂದು ಕರ್ತವ್ಯಕ್ಕೆ ಹಾಜರಾಗದ ವೈದ್ಯರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಉದ್ದೇಶಿಸಲಾಗಿದೆ.

ಮಾಗಡಿ ಕ್ಷೇತ್ರದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕೊಠಡಿಗಳ ಹಾಗೂ ಶಿಕ್ಷಕರ ಕೊರತೆ.

779(1208)) ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) :— ಮಾನ್ಯ ಪ್ರಾಥಮಿಕ ಹಾಗು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಾಗಡಿ ಕ್ಷೇತ್ರದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕೊಠಡಿಯ ಕೊರತೆ ಹಾಗೂ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕೊರತೆ ಇರುವ ಕೊಠಡಿ ಮತ್ತು ಶಿಕ್ಷಕರ ಸಂಖ್ಯೆ ಎಷ್ಟು? ಯಾವ ಶಾಲೆಗಳಲ್ಲಿ ಕೊರತೆ ಇದೆ.

ಇ) ಈ ಕೊರತೆ ನೀಗಿಸಲು ಸರಕಾರ ಕೈಗೊಂಡ ಕ್ರಮಗಳು ಯಾವುವು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗು ಪ್ರೌಢ ಶಿಕ್ಷಣ ಸಚಿವರು) :—

ಅ) ಬಂದಿದೆ.

ಆ) 42 ಕೊಠಡಿಗಳ ಕೊರತೆ ಇದೆ. 26 ಶಿಕ್ಷಕರ ಕೊರತೆ ಇದೆ.

ಇ) ಖಾಲಿ ಇರುವ 19 ಸಹ ಶಿಕ್ಷಕರ ಹಾಗೂ 7 ವೃತ್ತಿ ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಪ್ರಾಥಮಿಕ ಶಾಲಾ ಅರ್ಹ ಶಿಕ್ಷಕರಿಗೆ ಬಡ್ತಿ ನೀಡುವ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಈ) ಮಾಗಡಿ ಕ್ಷೇತ್ರದ ಗಂಗೋನಹಳ್ಳಿ ಪ್ರೌಢಶಾಲೆಗೆ ಸರ್ಕಾರದಿಂದ 9.00 ಲಕ್ಷ ಮಂಜೂರಾಗಿದ್ದು ಇದುವರೆಗೆ ರೂ 6.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಸರ್ಕಾರದಿಂದ ಹಂತಹಂತವಾಗಿ ಸರ್ಕಾರದಿಂದ ಆಯವ್ಯಯ ಒದಗಿಸಿಕೊಂಡು ಕೊರತೆಯನ್ನು ನೀಗಿಸಲಾಗುವುದು.

ಕೊರಟಗೆರೆ ಕ್ಷೇತ್ರಕ್ಕೆ ಹೊಸದಾಗಿ ಮಂಜೂರಾಗಿರುವ ಪ್ರೌಢಶಾಲೆಗಳು.

780(932) ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ 1998-99ನೇ ಸಾಲಿಗೆ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಆ) ಇವುಗಳಲ್ಲಿ ಕೊರಟಗೆರೆ ಕ್ಷೇತ್ರಕ್ಕೆ ಹೊಸದಾಗಿ ಮಂಜೂರಾಗಿರುವ ಪ್ರೌಢ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು?

ಇ) ಮಂಜೂರು ಮಾಡಲಾದ ಪ್ರೌಢಶಾಲೆಗಳ ಹಾಗೂ ಪ್ರಾಥಮಿಕ ಶಾಲೆಗಳ ಕಟ್ಟಡವು ಪೂರ್ಣಗೊಂಡಿದೆಯೇ, ಇಲ್ಲದಿದ್ದರೆ ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ಒದಗಿಸುವುದು)